# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 592

ಸದಸ್ಯರ ಹೆಸರು : ಶ್ರೀ ಹೆಚ್.ಎಸ್. ಗೋಪಿನಾಥ್
(ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು)

ಉತ್ತರಿಸುವ ದಿನಾಂಕ : 08.12.2023

ಉತ್ತರಿಸುವವರು : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಗ್ರಾಮ ಪಂಚಾಯಿತಿ ವ್ಯಾಪ್ತಿಯ ಯೋಜನೆಗಳ ಕ್ರಿಯಾ ಯೋಜನೆಗಳಿಗೆ ಅನುಮೋದನೆ ನೀಡುವ ಜವಾಬ್ದಾರಿ ಯಾರಿಗಿದೆ; (ವಿವರ ನೀಡುವುದು) | ಗ್ರಾಮ ಪಂಚಾಯತಿ ಸ್ವಂತ ಸಂಪನ್ಮೂಲದ ಮೂಲಕ ಸಂಗ್ರಹಿಸಿದ ಮೊತ್ತಕ್ಕೆ ಗ್ರಾಮ ಪಂಚಾಯತಿಗಳು ಕ್ರಿಯಾ ಯೋಜನೆಯನ್ನು ತಯಾರಿಸಿ, ಗ್ರಾಮ ಪಂಚಾಯತಿ ಸಾಮಾನ್ಯ ಸಭೆಯಲ್ಲಿ ಅನುಮೋದನೆ ಪಡೆಯಲಾಗುತ್ತಿದೆ.<br><br>15ನೇ ಕೇಂದ್ರ ಹಣಕಾಸು ಆಯೋಗದ ಮಾರ್ಗಸೂಚಿಯನ್ವಯ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಯೋಜನೆಗಳ ಕ್ರಿಯಾ ಯೋಜನೆಗಳಿಗೆ ಗ್ರಾಮ ಪಂಚಾಯತಿಯ ಸಾಮಾನ್ಯ ಸಭೆಯಲ್ಲಿ ಅನುಮೋದನೆ ನೀಡಲು ಅವಕಾಶ ಕಲ್ಪಿಸಲಾಗಿದೆ.<br><br>ಮಹಾತ್ಮಗಾಂಧಿ ನರೇಗಾ ಯೋಜನೆಯ ಕ್ರಿಯಾ ಯೋಜನೆಗೆ ಜಿಲ್ಲಾ ಪಂಚಾಯತಿಯಿಂದ ಅನುಮೋದನೆ ನೀಡಲಾಗುತ್ತಿದೆ. |
| (ಆ) | ಸದರಿ ಕ್ರಿಯಾ ಯೋಜನೆಗಳ ಅಂದಾಜು ಮೊತ್ತದ ಗಾತ್ರದ ಅನುಸಾರ ವಿವಿಧ ಉನ್ನತ ಕಛೇರಿಗಳ ಅನುಮೋದನೆಯಿಂದ ಗ್ರಾಮ ಪಂಚಾಯಿತಿ ಆಡಳಿತಕ್ಕೆ ಯಾವ ರೀತಿಯಲ್ಲಿ ಅನುಕೂಲವಾಗಲಿದೆ; (ವಿವರ ನೀಡುವುದು) | ರೂ:50.00 ಲಕ್ಷಕ್ಕೂ ಅಧಿಕ ಸ್ವಂತ ಸಂಪನ್ಮೂಲ ಹೊಂದಿರುವ ಗ್ರಾಮ ಪಂಚಾಯತಿಗಳು ಕಾಮಗಾರಿಗಳನ್ನು ಕೈಗೊಳ್ಳಲು ಕ್ರಿಯಾ ಯೋಜನೆಯನ್ನು ತಯಾರಿಸಲು ಮಾರ್ಗಸೂಚಿಗಳನ್ನು ಹೊರಡಿಸಲಾಗಿದ್ದು, ತಯಾರಿಸಲಾದ ಕ್ರಿಯಾ ಯೋಜನೆಗೆ ಸಕ್ಷಮ ಪ್ರಾಧಿಕಾರದಿಂದ ಅನುಮೋದನೆ ಪಡೆಯಲು ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 578 ಗ್ರಾಪಂಅ 2018, ದಿನಾಂಕ:01-10-2018 ರಲ್ಲಿ ತಿಳಿಸಲಾಗಿದೆ.<br><br>ಕರ್ನಾಟಕ ಗ್ರಾಮ ಸ್ವರಾಜ್ ಮತ್ತು |

| | | |
|---|---|---|
| | | ಪಂಚಾಯತ್ ರಾಜ್ (ಗ್ರಾಮ ಪಂಚಾಯತಿಗಳ ಆಯವ್ಯಯ ಮತ್ತು ಲೆಕ್ಕಪತ್ರಗಳು) ನಿಯಮಗಳು, 2006ರ ನಿಯಮ 80 ರ ಉಪ ನಿಯಮ (4) ರಂತೆ ಗ್ರಾಮ ಪಂಚಾಯತಿಗಳು ಅನುಷ್ಠಾನಗೊಳಿಸುವ ಅಂದಾಜು ವೆಚ್ಚ ರೂ:30.00 ಮೀರಿದಲ್ಲಿ, ಸರ್ಕಾರಕ್ಕೆ ಆಡಳಿತಾತ್ಮಕ ಅನುಮೋದನೆ ನೀಡಲು ಅವಕಾಶವಿದ್ದು, ಅದರಂತೆ, ರೂ:50.00 ಲಕ್ಷಕ್ಕೂ ಅಧಿಕ ಸ್ವಂತ ಸಂಪನ್ಮೂಲ ಹೊಂದಿರುವ ಗ್ರಾಮ ಪಂಚಾಯತಿಗಳು ಕಾಮಗಾರಿಗಳನ್ನು ಕೈಗೊಳ್ಳಲು ಕ್ರಿಯಾ ಯೋಜನೆಗೆ ಸರ್ಕಾರವು ಅನುಮೋದನೆ ನೀಡುತ್ತಿದೆ.<br><br>ತಾಲ್ಲೂಕು ಪಂಚಾಯತಿ/ ಜಿಲ್ಲಾ ಪಂಚಾಯತಿಯಿಂದ ಪರಿಶೀಲನೆ ನಡೆಯುವುದರಿಂದ ಕಾಮಗಾರಿಗಳು ಪುನರಾವರ್ತನೆಯಾಗದಂತೆ ತಡೆಯಬಹುದು. ವಿವಿಧ ಹಂತದ ಪರಿಶೀಲನೆಯಿಂದ ಕಾಮಗಾರಿಗಳ ಅನುಷ್ಠಾನದಲ್ಲಿ ಪಾರದರ್ಶಕತೆ ಮತ್ತು ಗುಣಮಟ್ಟವನ್ನು ಕಾಪಾಡಬಹುದಾಗಿದೆ. |
| (ಇ) | ಸದರಿ ಕ್ರಿಯಾ ಯೋಜನೆಗಳ ಅನುಮೋದನೆ ಕಾರ್ಯದಲ್ಲಿ ವಿವಿಧ ಕಛೇರಿಗಳ ಅಧಿಕಾರಿಗಳ ಭಾಗವಹಿಸುವಿಕೆಯಿಂದ ಅನಗತ್ಯ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರದ ಕ್ರಮವೇನು? (ವಿವರ ನೀಡುವುದು) | ಬಂದಿಲ್ಲ |

ಸಂಖ್ಯೆ: ಗ್ರಾಅಪ 611 ಗ್ರಾಪಂಅ 2023

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.